# MAY 06, 2026

# AKASHAVANI - DHARWAD

# PRADESH SAAMACHARA (KANNADA) 07.05 A.M

<><><>

**ಮುಖ್ಯಾಂಶಗಳು**

- **ಸಾಂಪ್ರದಾಯಿಕ ಜ್ಞಾನ, ಆಧುನಿಕ ವಿಜ್ಞಾನದೊಂದಿಗೆ ಸಂಯೋಜಿಸಿ, ಸಂಶೋಧನೆಯಲ್ಲಿ ಹೊಸ ನೆಲೆ ಕಂಡುಕೊಳ್ಳುವಂತೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ವಿದ್ಯಾರ್ಥಿಗಳಿಗೆ ಕರೆ.**
- **ಗ್ರಾಮೀಣ ಭಾಗದ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಸೂಕ್ತ ಕ್ರಮ– ಸಚಿವ ಪ್ರಿಯಾಂಕ ಖರ್ಗೆ.**
- **ರಸ್ತೆ ಕಾಮಗಾರಿ ತ್ವರಿತವಾಗಿ ಪೂರ್ಣಗೊಳಿಸುವಂತೆ ಸಚಿವ ಎನ್.ಎಸ್.ಭೋಸರಾಜು ಅಧಿಕಾರಿಗಳಿಗೆ ಸೂಚನೆ.**
- **ನೋಂದಣಿ ಪ್ರಮಾಣ ಪತ್ರ ಪಡೆಯದ ಹೋಂ ಸ್ಟೇಗಳ ವಿರುದ್ಧ ಪ್ರವಾಸೋದ್ಯಮ ಇಲಾಖೆ ಸೂಕ್ತ ಕ್ರಮ.**

## ಈಗ ವಾರ್ತೆಗಳ ವಿವರ

**ಸಾಂಪ್ರದಾಯಿಕ ಜ್ಞಾನವನ್ನು ಆಧುನಿಕ ವಿಜ್ಞಾನದೊಂದಿಗೆ** ಸಂಯೋಜಿಸಿ, ಸಂಶೋಧನೆಯಲ್ಲಿ ಹೊಸ ನೆಲೆಯನ್ನು ಕಂಡುಕೊಳ್ಳುವಂತೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ವಿದ್ಯಾರ್ಥಿಗಳಿಗೆ ಕರೆ ನೀಡಿದ್ದಾರೆ. ಬೆಂಗಳೂರಿನಲ್ಲಿ ಆಯೋಜಿಸಿದ್ದ "ವಿಶ್ವ ಹೋಮಿಯೋಪತಿ ದಿನ – 2026" ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಹೋಮಿಯೋಪತಿ ನೈಸರ್ಗಿಕ ಸಂಪನ್ಮೂಲಗಳ ಸಮತೋಲಿತ ಬಳಕೆಯನ್ನು ಉತ್ತೇಜಿಸುತ್ತದೆ. ಇಂದು, ಹೋಮಿಯೋಪತಿಯಲ್ಲಿ ವೈದ್ಯಕೀಯ ಸಂಶೋಧನೆಯನ್ನು ಉತ್ತೇಜಿಸುವ, ಆಧುನಿಕ ತಂತ್ರಜ್ಞಾನಗಳನ್ನು – ಡಿಜಿಟಲ್ ಆರೋಗ್ಯ ಮತ್ತು ಕೃತಕ ಬುದ್ಧಿಮತ್ತೆ – ಬಳಸಿಕೊಳ್ಳುವ ಹಾಗೂ ಅದರ ಫಲಿತಾಂಶಗಳನ್ನು ಜಾಗತಿಕ ವೇದಿಕೆಯಲ್ಲಿ ಪ್ರಸ್ತುತಪಡಿಸುವ ಅವಶ್ಯಕತೆಯಿದೆ. ಇದು ಅದರ ವಿಶ್ವಾಸಾರ್ಹತೆಯನ್ನು ಹೆಚ್ಚಿಸುತ್ತದೆ ಮತ್ತು ಜಾಗತಿಕ ಆರೋಗ್ಯ ವ್ಯವಸ್ಥೆಯಲ್ಲಿ ಹೆಚ್ಚು ಬಲವಾದ ಸ್ಥಾನವನ್ನು ಪಡೆಯಲು ಅನುವು ಮಾಡಿಕೊಡುತ್ತದೆ ಎಂದರು.

<><><>

**ರಾಜ್ಯದ ಗ್ರಾಮೀಣ ಜನವಸತಿ ಪ್ರದೇಶಗಳಲ್ಲಿ** ಎದುರಾಗಿರುವ ಕುಡಿಯುವ ನೀರಿನ ಅಭಾವವನ್ನು ತಗ್ಗಿಸಲು ಸರ್ಕಾರವು ಸಮರೋಪಾದಿಯಲ್ಲಿ ಕ್ರಮ ಕೈಗೊಂಡಿದ್ದು, ಕಳೆದ ಮಾರ್ಚ ತಿಂಗಳಿನಿಂದ ಇದುವರೆಗೆ ಒಟ್ಟು 208 ಕೋಟಿ 67 ಲಕ್ಷ ರೂಪಾಯಿ ಅನುದಾನವನ್ನು ಬಿಡುಗಡೆ ಮಾಡಿದೆ ಎಂದು ಸಚಿವ ಪ್ರಿಯಾಂಕ ಖರ್ಗೆ ತಿಳಿಸಿದ್ದಾರೆ. ಈ ಕುರಿತು ಎಕ್ಸ ಖಾತೆ ಮೂಲಕ ಮಾಹಿತಿ ಹಂಚಿಕೊಂಡಿರುವ ಅವರು, ತುರ್ತು ಕಾಮಗಾರಿಗಳಿಗಾಗಿ ಪುನಃ 72 ಕೋಟಿ ರೂಪಾಯಿ ಹೆಚ್ಚುವರಿ ಮೊತ್ತವನ್ನು ಬಿಡುಗಡೆ ಮಾಡಲಾಗಿದೆ. ಈ ಅನುದಾನವನ್ನು ಪ್ರಸಕ್ತ ಸಾಲಿನ ಹೊಸ ಕಾಮಗಾರಿಗಳ ಜೊತೆಗೆ, ಈ ಹಿಂದೆ ಟಾಸ್ಕ್ ಫೋರ್ಸ್ ಸಮಿತಿಯಿಂದ ಅನುಮೋದನೆ ಪಡೆದು ಪೂರ್ಣಗೊಂಡಿದ್ದ ಕಾಮಗಾರಿಗಳ ಬಾಕಿ ಪಾವತಿಗಾಗಿ ವಿನಿಯೋಗಿಸಲಾಗುವುದು ಎಂದಿದ್ದಾರೆ. ಬೇಸಿಗೆಯ ತೀವ್ರತೆಯಿಂದ ಅಂತರ್ಜಲ ಮಟ್ಟ ಕುಸಿದು ಕೊಳವೆ ಬಾವಿಗಳ ಇಳುವರಿ ಕಡಿಮೆಯಾಗಿರುವ ಹಿನ್ನೆಲೆಯಲ್ಲಿ, ಜಿಲ್ಲಾಡಳಿತಗಳು ಲಭ್ಯವಿರುವ ಕೊಳವೆ ಬಾವಿಗಳ ಆಳ ಹೆಚ್ಚಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ನೀರಿನ ಮೂಲಗಳಿಲ್ಲದ ಕಡೆಗಳಲ್ಲಿ ಖಾಸಗಿ ಕೊಳವೆಬಾವಿಗಳನ್ನು ಬಾಡಿಗೆಗೆ ಪಡೆಯಲು ಅಥವಾ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲು ಅನುಮತಿ

ನೀಡಲಾಗಿದೆ. ಅನಿವಾರ್ಯ ಸಂದರ್ಭಗಳಲ್ಲಿ ಭೂವಿಜ್ಞಾನಿಗಳ ವರದಿ ಆಧರಿಸಿ ಹೊಸ ಕೊಳವೆಬಾವಿ ಕೊರೆಯಲು ಹಾಗೂ ಪಂಪಿಂಗ್ ಯಂತ್ರಗಳನ್ನು ಅಳವಡಿಸಲು ಸೂಚಿಸಲಾಗಿದೆ. ಈ ಎಲ್ಲ ಕಾಮಗಾರಿಗಳನ್ನು ಕೈಗೊಳ್ಳುವಾಗ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ ಮತ್ತು ಆರ್ಥಿಕ ಸಂಹಿತೆಯ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಕಾಮಗಾರಿಗಳ ಭೌತಿಕ ಪ್ರಗತಿಯನ್ನು ಆಧರಿಸಿ ಮಾತ್ರ ಬಿಲ್‌ಗಳನ್ನು ಪಾವತಿಸಲು ಹಾಗೂ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯಿಂದ ಕಡ್ಡಾಯವಾಗಿ ಅನುಮೋದನೆ ಪಡೆಯಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.

<><><>

**ಜೂನ್ ಮೊದಲ ವಾರದಲ್ಲಿ ಮುಂಗಾರು ಆರಂಭವಾಗುವ ಸಾಧ್ಯತೆ** ಇದ್ದು, ರಸ್ತೆ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಕೊಡಗು ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್.ಭೋಸರಾಜು ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಮಡಿಕೇರಿಯಲ್ಲಿನಡೆದ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳಜಿಲ್ಲಾ ಮಟ್ಟದ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿಮಾತನಾಡಿದ ಅವರು, ಮಳೆಗಾಲದಲ್ಲಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಗಮನಹರಿಸಬೇಕು.ರಸ್ತೆ ನಿರ್ವಹಣೆಗಾಗಿ ಸರ್ಕಾರ ಸಾಕಷ್ಟು ಹಣ ನೀಡಿದ್ದರೂ, ಅದರ ಸದ್ಬಳಕೆಯಾಗದಿರುವುದು ಬೇಸರದ ಸಂಗತಿ ಎಂದರು. ಕೊಡಗು ಜಿಲ್ಲೆಯಾದ್ಯಂತ ಲೋಕೋಪಯೋಗಿ, ಪಂಚಾಯತ್ ರಾಜ್ ವ್ಯಾಪ್ತಿಯ ರಸ್ತೆಗಳ ಗುಂಡಿ ಮುಚ್ಚುವುದು ಸೇರಿದಂತೆ, ಅಗತ್ಯ ಕಾಮಗಾರಿ ಕೈಗೊಳ್ಳಬೇಕು. ಕೊಡಗು ಜಿಲ್ಲೆಯ ಎರಡು ವಿಧಾನಸಭಾ ಕ್ಷೇತ್ರಕ್ಕೆ ತಲಾ 110 ಕೋಟಿ ರೂಪಾಯಿ ಸರ್ಕಾರ ಬಿಡುಗಡೆ ಮಾಡಿದೆ. ಮೂಲ ಸೌಕರ್ಯಗಳಲ್ಲಿ ಕುಡಿಯುವ ನೀರು, ರಸ್ತೆ ಮತ್ತು ವಿದ್ಯುತ್ ಅತೀ ಮುಖ್ಯವಾಗಿದ್ದು, ಆ ನಿಟ್ಟಿನಲ್ಲಿ ಸ್ಥಳೀಯರ ಸಲಹೆ ಮಾರ್ಗದರ್ಶನ ಪಡೆದು ಅಭಿವೃದ್ಧಿಗೆ ಒತ್ತು ನೀಡಬೇಕು ಎಂದು ಸಚಿವರು ನಿರ್ದೇಶನ ನೀಡಿದರು.

<><><>

**ಪ್ರವಾಸಿಗರ ಅನುಕೂಲಕ್ಕಾಗಿ ಹೋಂ ಸ್ಟೇ ಪ್ರಾರಂಭಿಸಲು** ಕೆ.ಟಿ.ಟಿ.ಎಫ್–2015 ರ ಕಾಯ್ದೆಯಂತೆ ಪ್ರವಾಸೋದ್ಯಮ ಇಲಾಖೆಯಡಿ ನೋಂದಣಿ ಮಾಡಿಕೊಳ್ಳುವುದು ಕಡ್ಡಾಯವಾಗಿದೆ ಎಂದು ಪ್ರವಾಸೋದ್ಯಮ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ. ವಿಜಯನಗರ ಜಿಲ್ಲೆಯ ವಿಶ್ವ ಪಾರಂಪರಿಕತಾಣವಾದ ಹಂಪಿ, ಕಮಲಾಪುರ ವ್ಯಾಪ್ತಿಯಲ್ಲಿ ಹಾಗೂ ಜಿಲ್ಲೆಯ ಇತರೆ ಸ್ಥಳಗಳಲ್ಲಿ ಪ್ರವಾಸೋದ್ಯಮ ಇಲಾಖೆಯಡಿ ನೋಂದಣಿ ಮಾಡಿಕೊಳ್ಳದೇ, ಹಲವು ಹೋಂ ಸ್ಟೇ ಗಳು ಕಾರ್ಯ ನಿರ್ವಹಿಸುತ್ತಿರುವುದು ಗಮನಕ್ಕೆ ಬಂದ ಹಿನ್ನೆಲೆ, ಪ್ರವಾಸೋದ್ಯಮ ಇಲಾಖೆಯಿಂದ ಯಾವುದೇ ಅಧಿಕೃತ ಅನುಮೋದನೆ ಅಥವಾ ನೋಂದಣಿ ಮಾಡಿಕೊಳ್ಳದೇ ಇರುವ ಹೋಂ ಸ್ಟೇಗಳನ್ನು ಅನಧೀಕೃತ ಹೋಂ ಸ್ಟೇಗಳೆಂದು ಪರಿಗಣಿಸಲಾಗುತ್ತದೆ. ಆದ್ದರಿಂದ ಹೋಂ ಸ್ಟೇ ಗಳನ್ನು ಕಾನೂನು ಬದ್ಧವಾಗಿ ಮುಂದುವರೆಸಲು ಆಸಕ್ತಿ ಇರುವ ಮಾಲೀಕರು, ಅಗತ್ಯ ದಾಖಲೆಗಳೊಂದಿಗೆ ಹೋಂ ಸ್ಟೇ ನೋಂದಣಿಗೆ ಅರ್ಜಿ ಸಲ್ಲಿಸಿ, ನೋಂದಣಿ ಪ್ರಮಾಣ ಪತ್ರ ಪಡೆಯಲು ತಿಳಿಸಿದೆ. ನೋಂದಣಿ ಪ್ರಮಾಣ ಪತ್ರ ಪಡೆಯದೇ ಕಾರ್ಯಚರಣೆಯಲ್ಲಿರುವ ಹೋಂ ಸ್ಟೇ ಗಳನ್ನು ಕೂಡಲೇ ಸ್ಥಗಿತಗೊಳಿಸಬೇಕು. ಈ ಆದೇಶವನ್ನು ಉಲ್ಲಂಘಿಸಿ, ಯಾವುದೇ ಹೋಂ ಸ್ಟೇ ಮಾಲೀಕರು ಪ್ರವಾಸಿಗರಿಗೆ ಉಳಿದುಕೊಳ್ಳಲು ಕೊಠಡಿಗಳನ್ನು ನೀಡಿರುವುದು ಕಂಡು ಬಂದಲ್ಲಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಇಲಾಖೆ ತಿಳಿಸಿದೆ.

<><><>

**ಈಗ ಪ್ರಕಟಣೆ.**

**ನಂತರ ಪ್ರದೇಶ ಸಮಾಚಾರ ಮುಂದುವರೆಯುವುದು..**

<><><>

**( 42 ಸೆಕೆಂಡುಗಳು)**

<><><>

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..**

<><><>

**ರಾಜ್ಯಾದ್ಯಂತ ಮೇ ತಿಂಗಳಲ್ಲಿ** ಬಿಸಿಲಿನ ಧಗೆ ಹೆಚ್ಚಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದ ಹಿನ್ನೆಲೆಯಲ್ಲಿ, ತೀವ್ರವಾದ ತಾಪಮಾನದಿಂದ ಜಾನುವಾರುಗಳ ಆರೋಗ್ಯ ಮತ್ತು ಹಾಲಿನ ಉತ್ಪಾದನೆಯ ಮೇಲೆ ಉಂಟಾಗುವ ದುಷ್ಪರಿಣಾಮಗಳನ್ನು ತಡೆಗಟ್ಟಲು ಪಶು ವೈದ್ಯಕೀಯ ಮಹಾವಿದ್ಯಾಲಯದ ಡೀನ್, ಪಶುಪಾಲಕರಿಗೆ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳುವಂತೆ ಕೋರಿದ್ದಾರೆ. ಕಡು ಬಿಸಿಲಿರುವ ಮಧ್ಯಾಹ್ನದ ಸಮಯದಲ್ಲಿ ಜಾನುವಾರುಗಳ ಮೈಮೇಲೆ ನೀರನ್ನು ಸಿಂಪಡಿಸುವುದರ ಜೊತೆಗೆ ಒದ್ದೆಯಾದ ಗೋಣಿ ಚೀಲಗಳನ್ನು ಹೊದಿಸಬೇಕು. ಕೊಟ್ಟಿಗೆಯ ಮೇಲ್ಛಾವಣಿಗೆ ಸುಣ್ಣದ ಲೇಪನ ಮಾಡುವುದರಿಂದ ಅಥವಾ ತೆಂಗಿನ ಗರಿಗಳನ್ನು ಹೊದಿಸುವುದರಿಂದ ತಾಪಮಾನವನ್ನು ಕಡಿಮೆ ಮಾಡಬಹುದಾಗಿದೆ.ಜಾನುವಾರುಗಳಿಗೆ ಪೌಷ್ಟಿಕ ಆಹಾರ ಮತ್ತು ಅಗತ್ಯ ಪೋಷಕಾಂಶಗಳ ಪೂರಕಗಳನ್ನು ನೀಡಬೇಕು. ಸಾಧ್ಯವಾದಷ್ಟು ಮಧ್ಯಾಹ್ನದ ವೇಳೆ ಜಾನುವಾರುಗಳನ್ನು ಬಿಸಿಲಿಗೆ ಬಿಡದೆ, ಮರಗಳ ಕೆಳಗೆ ತಂಪಾದ ನೆರಳಿನಲ್ಲಿ ಇರುವಂತೆ ನೋಡಿಕೊಳ್ಳಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><>

**ವಿಜಯನಗರ ಜಿಲ್ಲೆಯಲ್ಲಿ ಏಪ್ರಿಲ್ 23 ರಿಂದ ದನ ಕರುಗಳಿಗೆ** ಕಾಲುಬಾಯಿ ರೋಗದ ಲಸಿಕಾ ಕಾರ್ಯಕ್ರಮವನ್ನು ಆರಂಭಿಸಲಾಗಿದ್ದು, ಮೇ 22 ರವರೆಗೆ ರಾಸುಗಳಿಗೆ ಲಸಿಕೆಯನ್ನು ಹಾಕಲಾಗುವುದು ಎಂದು ಪಶುಪಾಲನಾ ಮತ್ತು ಪಶು ವೈದ್ಯ ಸೇವಾ ಇಲಾಖೆಯ ಉಪನಿರ್ದೇಶಕರಾದ ಡಾಕ್ಟರ್ ಇಮ್ರಾನ್ ಎನ್.ಕೆ ತಿಳಿಸಿದ್ದಾರೆ. ಈ ಕುರಿತು ಅವರು ಆಕಾಶವಾಣಿಗೆ ಹೆಚ್ಚಿನ ಮಾಹಿತಿ ನೀಡಿದ್ದಾರೆ.

<><><>

**ಧ್ವನಿ–ಡಾ.ಇಮ್ರಾನ್ ಎನ್.ಕೆ (41 ಸೆಕೆಂಡುಗಳು)**

<><><>

**ಈಗ ಸಂಕ್ಷಿಪ್ತ ಸುದ್ದಿಗಳು**

**ಯಾದಗಿರಿ ನಗರದ ಯಾದಗಿರಿ–ಸೇಡಂ** ರಾಜ್ಯ ಹೆದ್ದಾರಿಯ ಹತ್ತಿಕುಣಿ ಕ್ರಾಸ್ ಪ್ರದೇಶವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಲು 5 ಕೋಟಿ ರೂಪಾಯಿ ವೆಚ್ಚದಲ್ಲಿ ಕಾಮಗಾರಿ ಕೈಗೊಳ್ಳಲಾಗುವುದು ಎಂದು ಯಾದಗಿರಿ ಮತಕ್ಷೇತ್ರದ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ್ ತಿಳಿಸಿದ್ದಾರೆ.

<><><>

**ಬೆಂಗಳೂರು ಗ್ರಾಮಾಂತರ ಜಿಲ್ಲೆಯ** ಹೊಸಕೋಟೆ ತಾಲ್ಲೂಕಿನ ಸೂಲಿಬೆಲೆ ಹೋಬಳಿ ವ್ಯಾಪ್ತಿಯಲ್ಲಿ ಖಾಸಗಿ ಕಂಪನಿಗೆ ಸೇರಿದ ಗೋಡೌನ್ ಒಂದರಲ್ಲಿ ರಾತ್ರಿ ಪಾಳಿಯಲ್ಲಿ ಬಾಲ ಹಾಗೂ ಕಿಶೋರ ಕಾರ್ಮಿಕರು ದುಡಿಮೆ ಮಾಡುತ್ತಿದ್ದಾರೆ ಎಂಬ ಖಚಿತ ಮಾಹಿತಿ ಮೇರೆಗೆ ಕಾರ್ಮಿಕ ಇಲಾಖೆ ಮತ್ತು ಜಿಲ್ಲಾ ಬಾಲಕಾರ್ಮಿಕ ಯೋಜನೆ ಜಂಟಿ ಕಾರ್ಯಾಚರಣೆ ನಡೆಸಿ 11 ಮಕ್ಕಳ ರಕ್ಷಿಸಿದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಹರ್ಷವರ್ಧನ್ ತಿಳಿಸಿದ್ದಾರೆ.

<><><>

**ಶಿಕ್ಷಣ, ಸಾಹಿತ್ಯ ಮತ್ತು ಮಾಧ್ಯಮ ಪರಸ್ಪರ** ಸಹಕಾರದೊಂದಿಗೆ ಕಾರ್ಯ ನಿರ್ವಹಿಸಿದಲ್ಲಿ ಸಾಮಾಜಿಕ ನ್ಯಾಯವನ್ನು ಮತ್ತಷ್ಟು ಹೆಚ್ಚಿಸುವ ಮೂಲಕ ಸಮಾಜವನ್ನು ಸುಧಾರಿಸಲು ಅವಕಾಶವಿದೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾಕ್ಟರ್ ಕೋಡಿರಂಗಪ್ಪ ಹೇಳಿದ್ದಾರೆ. ಕನ್ನಡ ಸಾಹಿತ್ಯ ಪರಿಷತ್ತಿನ 112 ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

<><><>

**ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ** ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ನೋಂದಾಯಿತ ಪ್ರತಿಯೊಂದು ಕುಟುಂಬವೂ ವರ್ಷಕ್ಕೆ ನೂರು ದಿನಗಳ ಕೂಲಿ ಕೆಲಸದ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಯಾದಗಿರಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಲವೀಶ್ ಒರಡಿಯಾ ತಿಳಿಸಿದ್ದಾರೆ.

<><><>

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

- **ಸಾಂಪ್ರದಾಯಿಕ ಜ್ಞಾನ, ಆಧುನಿಕ ವಿಜ್ಞಾನದೊಂದಿಗೆ ಸಂಯೋಜಿಸಿ, ಸಂಶೋಧನೆಯಲ್ಲಿ ಹೊಸ ನೆಲೆ ಕಂಡುಕೊಳ್ಳುವಂತೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ವಿದ್ಯಾರ್ಥಿಗಳಿಗೆ ಕರೆ.**
- **ಗ್ರಾಮೀಣ ಭಾಗದ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಸೂಕ್ತ ಕ್ರಮ– ಸಚಿವ ಪ್ರಿಯಾಂಕ ಖರ್ಗೆ.**
- **ರಸ್ತೆ ಕಾಮಗಾರಿ ತ್ವರಿತವಾಗಿ ಪೂರ್ಣಗೊಳಿಸುವಂತೆ ಸಚಿವ ಎನ್.ಎಸ್.ಭೋಸರಾಜು ಅಧಿಕಾರಿಗಳಿಗೆ ಸೂಚನೆ.**
- **ನೋಂದಣಿ ಪ್ರಮಾಣ ಪತ್ರ ಪಡೆಯದ ಹೋಂ ಸ್ಟೇಗಳ ವಿರುದ್ಧ ಪ್ರವಾಸೋದ್ಯಮ ಇಲಾಖೆ ಸೂಕ್ತ ಕ್ರಮ.**

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 7 ಗಂಟೆ 35 ನಿಮಿಷಕ್ಕೆ.**

<><><>